# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಂಖ್ಯೆ:** ಬಿ12(ಸಿ1)ಪಿಆರ್/38/2019–20

ಆಯುಕ್ತರವರ ಕಛೇರಿ,

ಮಹಾನಗರ ಪಾಲಿಕೆ ಕಛೇರಿಗಳ

ಬೆಂಗಳೂರು, ದಿನಾಂಕ: 18/10/19

**ಆಂತರಿಕ ಕಛೇರಿ ಟಿಪ್ಪಣಿ**

**ಎಲ್ಲಾ ಬಟವಾಡೆ ಅಧಿಕಾರಿಗಳಿಗೆ**

**ವಿಷಯ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳ ಹಾಜರಾತಿಯನ್ನು Aadhaar Based Biometric Fingerprint ವ್ಯವಸ್ಥೆಯಡಿ ದಾಖಲಿಸಿ ವೇತನವನ್ನು ಪಾವತಿಸುವ ಬಗ್ಗೆ.

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗ ಪಾಲಿಕೆಯ ಎಲ್ಲಾ ಕಛೇರಿಗಳಲ್ಲಿ Aadhaar Based Biometric Finger Print Authenticato ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಹಾಜರಾತಿ ವ್ಯವಸ್ಥೆಯನ್ನು ಪೂರ್ಣ ಪ್ರಮಾಣದ ಅನುಷ್ಠಾನಗೊಳಿಸಲು ಈ ಕೆಳಗೆ ತಿಳಿಸಲಾಗಿರುವ ನಮೂನೆಯ ಪ್ರಕಾರ ಎಲ್ಲಾ ಅಧಿಕಾರಿ ಸಿಬ್ಬಂದಿಗ ಮಾಹಿತಿಗಳನ್ನು DDO wise ಆಂಗ್ಲ ಭಾಷೆಯಲ್ಲಿ ಭರ್ತಿ ಮಾಡಿ **(ಮಾಹಿತಿಗಳನ್ನು ಕಡ್ಡಾಯವಾಗಿ ಆಧಾರ ಕಾರ್ಡ್‌ನಲ್ಲಿ ನಮೂದಿಸಿರುವಂತೆ)** ತಪ್ಪದೇ ಮಾಹಿತಿ ತಂತ್ರಜ್ಞಾನ ಇಲಾಖೆಗೆ softcopy ರೂಪದಲ್ಲಿ ಈ-ಮೇಲ್ ವಿಳಾಸ: bbmpit@gmail.com ಗೆ ಜರೂರಾಗಿ ನೀಡಲು ಪಾಲಿಕೆಯಲ್ ಕಾರ್ಯನಿರ್ವಹಿಸುತ್ತಿರುವ ಎಲ್ಲಾ 141 ಬಟವಾಡೆ ಅಧಿಕಾರಿಗಳಿಗೆ ಈ ಮೂಲಕ ಸೂಚಿಸಿದೆ.

**ನಮೂನೆ**

| Full Name | Date of Birth | Employee ID Number and Gender | Designation | Full Aadhaar Number | Mobile Number | Employee Type | DDO code | Pho |
|---|---|---|---|---|---|---|---|---|

**ಹೆಚ್ಚಿನ ಮಾಹಿತಿಗಾಗಿ:** ಶ್ರೀ ಪ್ರಶಾಂತ್, ಮೊಬೈಲ್ ಸಂಖ್ಯೆ: 9480685021 ರವರನ್ನು ಸಂಪರ್ಕಿಸಿ.

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:** ಪೂಜ್ಯ ಮಹಾಪೌರರುರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
: ಪೂಜ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(ಸಿ1)/ಪಿಆರ್/38/2019-20

ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 27/09/2019

## ಸುತ್ತೋಲೆ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳ ಹಾಜರಾತಿಯನ್ನು Aadhar Based Biometric System ವ್ಯವಸ್ಥೆಯಡಿ ದಾಖಲಿಸಿ, ವೇತನವನ್ನು ಪಾವತಿಸುವ ಬಗ್ಗೆ.

* * * * *

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳ ಹಾಜರಾತಿ ಪದ್ಧತಿಯನ್ನು ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಈಗಾಗಲೇ ಅಳವಡಿಸಲಾಗಿದ್ದು, ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಲಾಗಿದ್ದರೂ ಸಹ ಕೆಲವೊಂದು ಕಛೇರಿಗಳಲ್ಲಿ ಮಾತ್ರ ಅಳವಡಿಸಲಾಗಿದ್ದು, ಇನ್ನು ಕೆಲವು ಕಛೇರಿಗಳಲ್ಲಿ ಯಾವುದೇ ಕ್ರಮ ಜರುಗಿಸಿರುವುದಿಲ್ಲ. ಆದ್ದರಿಂದ ಅಧಿಕಾರಿ / ನೌಕರರು ಕಛೇರಿ ಹಾಜರಾತಿಯಲ್ಲಿ ಶಿಸ್ತುಪಾಲನೆ ಕೊರತೆಯು ಕಂಡು ಬಂದಿರುತ್ತದೆ. ಆದ್ದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿ ಹಾಗೂ 8 ವಲಯಗಳ ಕಛೇರಿಗಳು, ಎಲ್ಲಾ ವಿಭಾಗ ಕಛೇರಿಗಳು ಮತ್ತು ಉಪ ವಿಭಾಗಗಳಲ್ಲಿ Aadhar Based Biometric System ವ್ಯವಸ್ಥೆಯನ್ನು ಇಲಾಖೆಗಳಲ್ಲಿ ಅಳವಡಿಸಿ ಕ್ರಮವಹಿಸುವುದು ಅವಶ್ಯಕವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳ ವೇತನವನ್ನು ಸೆಳೆಯಲು ಹಾಲಿ 141 Drawing and Disbursing Officers (DDO)ರ ಅಡಿಯಲ್ಲಿ ಹಂಚಿಕೆಯಾಗಿದ್ದು, ಸದರಿ ವೇತನ ಬಟವಾಡೆ ಅಧಿಕಾರಿಗಳಿಗೆ ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳ ವಿವರಗಳನ್ನು Aadhar Based Biometric Attendance System ವ್ಯವಸ್ಥೆಯಡಿ ಕಡ್ಡಾಯವಾಗಿ ನೊಂದಾಯಿಸಲು ಕೂಡಲೇ ಮಾಹಿತಿ ತಂತ್ರಜ್ಞಾನ ಸಲಹೆಗಾರರೊಂದಿಗೆ ಸಮನ್ವಯ ಸಾಧಿಸಲು ಸೂಚಿಸಿದೆ ಹಾಗೂ ಎಲ್ಲಾ ಅಧಿಕಾರಿ / ನೌಕರರುಗಳು ತಮ್ಮ ಹಾಜರಾತಿಯನ್ನು ಕಡ್ಡಾಯವಾಗಿ ಸದರಿ ವ್ಯವಸ್ಥೆಯಲ್ಲಿಯೇ ದಾಖಲಿಸಲು (Including both ministerial and executive staff) ಹಾಗೂ ಪ್ರತಿ ಮಾಹೆಯ ವೇತನವನ್ನು Aadhar Based Biometric Attendance System ಹಾಜರಾತಿಯನ್ನು ಬಳಸಿಕೊಂಡು ಪಾವತಿಸಲು ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

(ಸಹಿ)
ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಮಾನ್ಯ ಆಯುಕ್ತರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ/ಹಣಕಾಸು) ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
: ಅಪರ ಆಯುಕ್ತರು (ಆಡಳಿತ/ಘನತ್ಯಾಜ್ಯ ನಿರ್ವಹಣೆ) ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ ಪಾಲಿಕೆಯ ವೆಬ್ ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಕಛೇರಿ ಪ್ರತಿ.